ಕ್ರಿಯಾ ಯೋಜನೆ ಸಿದ್ಧಪಡಿಸಿ ಶೀಘ್ರವೇ ಕಟ್ಟಡ ಕಾಮಗಾರಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು.

ಇ) ಅಗತ್ಯಾನುಸಾರ ಕ್ರಿಯಾ ಯೋಜನೆ ಸಿದ್ದಪಡಿಸಲಾಗುತ್ತಿದೆ.

ಶಾಲಾ ಶಿಕ್ಷಕರುಗಳಿಗೆ 1 ನೇ ತಾರೀಖಿನಂದೇ ವೇತನ ಪಾವತಿ ಮಾಡುವ ಕುರಿತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 129 (106)
ಸದಸ್ಯರ ಹೆಸರು : ಶ್ರೀ ಶ್ರೀನಿವಾಸ್. ಎಂ (ಮಂಡ್ಯ)
ಉತ್ತರಿಸುವ ಸಚಿವರು : ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಪ್ರಶ್ನೆಗಳು:

ಅ) ರಾಜ್ಯದಲ್ಲಿ ಶಾಲಾ ಶಿಕ್ಷಕರುಗಳಿಗೆ 1ನೇ ತಾರೀಖಿನಂದೇ ವೇತನ ಪಾವತಿಯಾಗುವಂತೆ ಶಿಕ್ಷಣ ಇಲಾಖೆಯು ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಶಿಕ್ಷಕರ ವೇತನವು ನಿಗದಿತ ದಿನಾಂಕದಂದು ಪಾವತಿಯಾಗುತ್ತಿದೆಯೇ?

ಇ) ಶಿಕ್ಷಕರಿಗೆ ವೈದ್ಯಕೀಯ ವೆಚ್ಚದ ಮರು ಪಾವತಿಗೆ ಕೋಟ್ಯಾಂತರ ರೂಪಾಯಿಯ ಅನುದಾನದ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಅಗತ್ಯವಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು?

ಉ) ಮಂಡ್ಯ ಜಿಲ್ಲೆಯ ಶಿಕ್ಷಕರುಗಳಿಗೆ ವೈದ್ಯಕೀಯ ವೆಚ್ಚದ ಮರುಪಾವತಿಗೆ ಬಿಲ್ಲುಗಳು ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಊ) ಹಾಗಿದ್ದಲ್ಲಿ, ಮರುಪಾವತಿಗೆ ಬೇಕಾಗಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ?

ಉತ್ತರಗಳು:

ಅ) ಬಂದಿದೆ.

ಸುತ್ತೋಲೆ ಸಂಖ್ಯೆ: ಆಯವ್ಯಯ, 3: ವೇತನ: ಪಾವತಿ:2, 2011–12, ದಿನಾಂಕ 24.05.2011.

ಆ) ವೇತನ ಪಾವತಿಯು ವಿಳಂಬವಾಗುತ್ತಿರುವ ಬಗ್ಗೆ ಯಾವುದೇ ದೂರು ಬಂದಿರುವುದಿಲ್ಲ.

ಇ) ಬಂದಿದೆ.

ವೈದ್ಯಕೀಯ ವೆಚ್ಚ ಮರುಪಾವತಿಗೆ ರೂ. 2105.00 ಲಕ್ಷಗಳು.
ಪ್ರವಾಸ ಭತ್ಯೆ ಪಾವತಿಗಾಗಿ ರೂ. 512.00 ಲಕ್ಷಗಳು

ಈ) ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಿದ್ದು ಅಗತ್ಯ ಅನುದಾನವನ್ನು ಶೀಘ್ರವಾಗಿ ಬಿಡುಗಡೆ ಮಾಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಉ) ಬಂದಿದೆ.

ಊ) ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಿದ್ದು ಅಗತ್ಯ ಅನುದಾನವನ್ನು ಶೀಘ್ರವಾಗಿ ಬಿಡುಗಡೆ ಮಾಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಗ್ರಾಮೀಣ ಸಂಪರ್ಕ ರಸ್ತೆ ಅಭಿವೃದ್ಧಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 133 (132)
ಸದಸ್ಯರ ಹೆಸರು : ಶೀ ಸಿ.ಬಿ.ಸುರೇಶ್ ಬಾಬು (ಚಿಕ್ಕನಾಯಕನಹಳ್ಳಿ)
ಉತ್ತರಿಸುವ ಸಚಿವರು : ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಪ್ರಶ್ನೆಗಳು:

ಅ) ತುಮಕೂರು ಜಿಲ್ಲೆ ಚಿಕ್ಕನಾಕನಹಳ್ಳಿ ವಿಧಾನಸಭಾ ಕ್ಷೇತ್ರದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ಸಂಪರ್ಕ ರಸ್ತೆಗಳು ಅನುದಾನದ ಕೊರತೆಯಿಂದ ದುರಸ್ತಿಯಾಗದಿರುವುದು ಸರ್ಕಾರದ